**ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ**

**ರಾಣೇಬೆನ್ನೂರು.**

**ಸಿಸಿ ನಂಬರಃ 2122/2024**

ಸಿ ಡಬ್ಲ್ಯೂ -7

ಪಿ ಡಬ್ಲ್ಯೂ-5

| | | |
|---|---|---|
| **ಸಾಕ್ಷಿದಾರರ ಹೆಸರು** | : | ಶಾಂತವ್ವ |
| **ತಂದೆ/ಗಂಡನ ಹೆಸರು** | : | ಹನುಮಂತಪ್ಪ ಸಾಂತ್ವನಿ |
| **ವಯಸ್ಸು** | : | 38 ವರ್ಷ |
| **ಉದ್ಯೋಗ** | : | ಮನೆ ಕೆಲಸ |
| **ವಾಸ** | : | ಕುಕ್ಕನೂರು |

**ದಿನಾಂಕಃ 23-07-2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಖ್ಯ ವಿಚಾರಣೆ ಸಹಾಯಕ ಸರ್ಕಾರಿ ಅಭಿಯೋಜಕರು ಅವರಿಂದಃ**

ಮೃತ ಗಂಗವ್ವ ನನ್ನ ಅತ್ತೆ. ನಾನು ನನ್ನ ಅತ್ತೆ ಎರಡು ವರ್ಷದ ಹಿಂದೆ ದೇವರುಗುಡ್ಡಕ್ಕೆ ಹೋಗಿ ವಾಪಸ್ಸು ಬರುವಾಗ ಹಿಂದಿನಿಂದ ಯಾವುದೋ ಒಂದು ವಾಹನ ಬಂದು ಅಪಘಾತಪಡಿಸಿತ್ತು ಆಗ ನನಗೆ ಪ್ರಜ್ಞೆ ಇರಲಿಲ್ಲ. ನಂತರ ಹುಬ್ಬಳ್ಳಿಯ ಕೀಮ್ಸ ಆಸ್ಪತ್ರೇಗೆ ಸೇರಿಸಿದ್ದರು. ಅಪಘಾತ ಹೇಗೆ ಯಾರ ತಪ್ಪಿನಿಂದ ಆಯಿತು ಎಂದು ನನಗೆ ಗೊತ್ತಿಲ್ಲ. ಆರೋಪಿತ ನನಗೆ ಗೊತ್ತಿಲ್ಲ. ನಾನು ಪೋಲಿಸರಿಗೆ ಯಾವುದೇ ಹೇಳಿಕೆ ಕೊಟ್ಟಿಲ್ಲ.

( ಈ ಹಂತದಲ್ಲಿ ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಸ.ಸ.ಅ ಅವರು ನಿವೇದಿಸಿಕೊಂಡಿದ್ದು ಸದರಿ ನಿವೇದನೆಯನ್ನು ಪರಿಗಣಿಸಿ ಸ.ಸ.ಅ ಅವರಿಗೆ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರು ಅವರಿಂದಃ`**

ದಿನಾಂಕ 27.11.2023 ರಂದು ದೇವರಗುಡ್ಡದ ಗ್ರಾಮದ ದೇವಸ್ಥಾನನಿದಿಂದ ಬಸ್ಟಾಂಡ್ ಗೆ ಬರುವಾಗ ಯಾವುದೋ ಒಂದು ವಾಹನ ಹಿಂಬದಿಯಿಂದ ಜೋರಾಗಿ ಬಂದು ಅಪಘಾತಪಡಿಸಿದ ಮೇರೆಗೆ ನನ್ನ ಅತ್ತೆ ಗಂಗವ್ವ ಸ್ಥಳದಲ್ಲಿ ಮೃತಪಟ್ಟಿದ್ದು ನನಗೆ ಮೈಕೈಗೆ ಒಳಪೆಟ್ಟು ಬಿದ್ದಿತ್ತು ರಾಣೆಬೇನ್ನೂರು ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ನಂತರ ಹುಬ್ಬಳ್ಳಿಯಕೀಮ್ಸ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಲಾಯಿತು. ಅಶೋಕ ಲೈಲ್ಯಾಂಡ್ ವಾಹನ ಸಂಖ್ಯೆ ಕೆ ಎ 27 ಸಿ 5413 ಸದರಿ ವಾಹನವನ್ನು ಬಸವರಾಜ ಎನ್ನುವವರು ಚಲಾಯಿಸುತ್ತಿದ್ದ ಎಂದರೆ ಸರಿಯಲ್ಲ.

ಸಿ ಡಬ್ಲ್ಯೂ -7

ಪಿ ಡಬ್ಲ್ಯೂ-5

ಅಪಘಾತಪಡಿಸಿದ ಬಸವರಾಜ ನ್ಯಾಯಾಲಯದ ಮುಂದಿರುವ ವ್ಯಕ್ತಿಯೇ ಎಂದರೆ ಸರಿಯಲ್ಲ. ಈ ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ ವಿಚಾರವಾಗಿ ನಾನು ಪೋಲಿಸರಿಗೆ ಹೇಳಿಕೆ ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಹೇಳಿಕೆಯನ್ನು ನಿ ಪಿ -9 ಎಂದು ಗುರುತಿಸಲಾಯಿತು. ನಾನು ಆರೋಪಿತನಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು : ಆರೋಪಿತರ ಪರ ಶ್ರೀ ಆರ್ ಸಿ ಎಸ್ ವಕೀಲರಿಂದಃ**

ಇಲ್ಲವೆಂದು ಹೇಳಿರುತ್ತಾರೆ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸರಿ ಇದೆ.

ಸಹಿ/-

(ಶ್ರೀಮತಿ ಹುಲ್ಲೂರ ಹೇಮಲತಾ ಬಸಪ್ಪ)
ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು,
ರಾಣೇಬೆನ್ನೂರು.

## ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ ರಾಣೇಬೆನ್ನೂರು.

## ಸಿಸಿ ನಂಬರಃ 2122/2024

ಸಿ ಡಬ್ಲ್ಯೂ –6

ಪಿ ಡಬ್ಲ್ಯೂ–4

| | | |
|---|---|---|
| **ಸಾಕ್ಷಿದಾರರ ಹೆಸರು** | : | ಈರಪ್ಪ |
| **ತಂದೆ/ಗಂಡನ ಹೆಸರು** | : | ಲಕ್ಷ್ಮಪ್ಪ ಕಾಳಿ |
| **ವಯಸ್ಸು** | : | 48 ವರ್ಷ |
| **ಉದ್ಯೋಗ** | : | ಗೌಂಡಿ ಕೆಲಸ |
| **ವಾಸ** | : | ಕುಕ್ಕನೂರು |

**ದಿನಾಂಕಃ 23–07–2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಖ್ಯ ವಿಚಾರಣೆ ಸಹಾಯಕ ಸರ್ಕಾರಿ ಅಭಿಯೋಜಕರು ಅವರಿಂದಃ**

ಮೃತ ಗಂಗವ್ವ ನನ್ನ ಅತ್ತೆ. ಚಾಸಾ–7 ನನ್ನ ಮಗಳು. 2023 ರಂದು ಬಾತ್ಮಿದಾರರರಿಂದ ಫೋನ್ ಬಂದ ಮೇರೆಗೆ ನಾನು ರಾಣೇಬೆನ್ನೂರು ಸರ್ಕಾರಿ ಆಸ್ಪತ್ರೆಗೆ ಹೋಗಿ ನೋಡಿರುತ್ತೇನೆ. ಅಪಘಾತ ಹೇಗೆ ಯಾರ ತಪ್ಪಿನಿಂದ ಆಯಿತು ಎಂದು ನನಗೆ ಗೊತ್ತಿಲ್ಲ. ಆರೋಪಿತ ನನಗೆ ಗೊತ್ತಿಲ್ಲ.

( ಈ ಹಂತದಲ್ಲಿ ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಸ.ಸ.ಅ ಅವರು ನಿವೇದಿಸಿಕೊಂಡಿದ್ದು ಸದರಿ ನಿವೇದನೆಯನ್ನು ಪರಿಗಣಿಸಿ ಸ.ಸ.ಅ ಅವರಿಗೆ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರು ಅವರಿಂದಃ`**

ಅಶೋಕ ಲೈಲ್ಯಾಂಡ್ ವಾಹನ ಸಂಖ್ಯೆ ಕೆ ಎ 27 ಸಿ 5413 ಗಾಡಿಯು ವಾಹನವನ್ನು ಅತೀ ವೇಗವಾಗಿ ಅಜಾಗಕರೂಕತೆಯಿಂದ ಚಲಾಯಿಸಿಕೊಂಡು ಬಂದು ಗಂಗವ್ವ ಹಾಗೂ ಚಾಸಾ–6 ರವರಿಗೆ ಡಿಕ್ಕಿಪಡಿಸಿತು ಎಂದರೆ ಸರಿ. ಆ ಕಾಲಕ್ಕೆ ಒಂದು ಮೋಟಾರ್ ಸೈಕಲ್ ಗೂ ಅಪಘಾತಪಡಿಸಿತ್ತು ಎಂದರೆ ಸರಿ. ಅಪಘಾತಪಡಿಸಿದ ಬಸವರಾಜ ನ್ಯಾಯಾಲಯದ ಮುಂದಿರುವ ವ್ಯಕ್ತಿಯೇ ಎಂದರೆ ಸರಿಯಲ್ಲ. ಈ ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ

ಸಿ ಡಬ್ಲ್ಯೂ -6

ಪಿ ಡಬ್ಲ್ಯೂ-4

ಎಂದರೆ ಸರಿಯಲ್ಲ. ಸದರಿ ವಿಚಾರವಾಗಿ ನಾನು ಪೋಲಿಸರಿಗೆ ಹೇಳಿಕೆ ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಹೇಳಿಕೆಯನ್ನು ನಿ ಪಿ -8 ಎಂದು ಗುರುತಿಸಲಾಯಿತು. ನಾನು ಆರೋಪಿತನಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು : ಆರೋಪಿತರ ಪರ ಶ್ರೀ ಆರ್ ಸಿ ಎಸ್ ವಕೀಲರಿಂದಃ**

ಅಪಘಾತ ಯಾರ ತಪ್ಪಿನಿಂದ ಆಗಿದೆ ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸರಿ ಇದೆ.

ಸಹಿ/-

(ಶ್ರೀಮತಿ ಹುಲ್ಲೂರ ಹೇಮಲತಾ ಬಸಪ್ಪ)
ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು,
ರಾಣೇಬೆನ್ನೂರು.

## ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ ರಾಣೇಬೆನ್ನೂರು.

## ಸಿಸಿ ನಂಬರಃ 2122/2024

ಸಿ ಡಬ್ಲ್ಯೂ -5

ಪಿ ಡಬ್ಲ್ಯೂ-3

| | | |
|---|---|---|
| **ಸಾಕ್ಷಿದಾರರ ಹೆಸರು** | : | ಪಕ್ಕೀರಪ್ಪ |
| **ತಂದೆ/ಗಂಡನ ಹೆಸರು** | : | ತಾಯಿ ನಿಂಗವ್ವ ಸಾಲ್ಮನಿ |
| **ವಯಸ್ಸು** | : | 51 ವರ್ಷ |
| **ಉದ್ಯೋಗ** | : | ಗೌಂಡಿ ಕೆಲಸ |
| **ವಾಸ** | : | ಕುಕ್ಕನೂರು |

**ದಿನಾಂಕಃ 23-07-2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಖ್ಯ ವಿಚಾರಣೆ ಸಹಾಯಕ ಸರ್ಕಾರಿ ಅಭಿಯೋಜಕರು ಅವರಿಂದಃ**

ಮೃತ ಗಂಗವ್ವ ನನ್ನ ಅಕ್ಕ. ದಿನಾಂಕ 27.11.2023 ರಂದು ಮೃತಳು ದೇವರಗುಡ್ಡಕ್ಕೆ ದರ್ಶನಕ್ಕೆಂದು ಬಂದಿದ್ದಳು. ಮೃತ ಹಾಗೂ ಚಾಸಾ-6 ರವರು ದೇವರಗುಡ್ಡಕ್ಕೆ ಹೋಗಿ ವಾಪಸ್ಸು ಬರುವಾಗ ಅಶೋಕ ಲೈಲ್ಯಾಂಡ್ ವಾಹನ ಅವರ ಹಿಂದಿನಿಂದ ಬಂದು ಡಿಕ್ಕಿಪಡಿಸಿ ಅಪಘಾತಪಡಿಸಿತು. ಆಗ ಶಾಂತವ್ವ ಸ್ಥಳದಲ್ಲಿ ಪ್ರಜ್ಞೆ ತಪ್ಪಿ ಬಿದ್ದಿದ್ದಳು. ಆರೋಪಿಯ ಹೆಸರು ಬಸವರಾಜ ಎಂದು ಹೇಳಿರುತ್ತಾರೆ. ಅಪಘಾತದ ಅಶೋಕ ಲೈಲ್ಯಾಂಡ್ ವಾಹನದ ಚಾಲಕನ ತಪ್ಪಿನಿಂದ ಆಗಿರುತ್ತದೆ. ಆರೊಪಿತ ನನಗೆ ಗೊತ್ತಿಲ್ಲ.

( ಈ ಹಂತದಲ್ಲಿ ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಸ.ಸ.ಅ ಅವರು ನಿವೇದಿಸಿಕೊಂಡಿದ್ದು ಸದರಿ ನಿವೇದನೆಯನ್ನು ಪರಿಗಣಿಸಿ ಸ.ಸ.ಅ ಅವರಿಗೆ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರು ಅವರಿಂದಃ`**

ಅಶೋಕ ಲೈಲ್ಯಾಂಡ್ ವಾಹನ ಸಂಖ್ಯೆ ಕೆ ಎ 27 ಸಿ 5413 ಗಾಡಿಯು ವಾಹನವನ್ನು ಅತೀ ವೇಗವಾಗಿ ಅಜಾಗಕರೂಕತೆಯಿಂದ ಚಲಾಯಿಸಿಕೊಂಡು ಬಂದು ಗಂಗವ್ವ ಹಾಗೂ ಚಾಸಾ-6 ರವರಿಗೆ ಡಿಕ್ಕಿಪಡಿಸಿತು ಎಂದರೆ ಸರಿ. ಆ ಕಾಲಕ್ಕೆ ಒಂದು ಮೋಟಾರ್ ಸೈಕಲ್ ಗೂ ಅಪಘಾತಪಡಿಸಿತ್ತು ಎಂದರೆ ಸರಿ. ಅಪಘಾತಪಡಿಸಿದ ಬಸವರಾಜ ನ್ಯಾಯಾಲಯದ ಮುಂದಿರುವ ವ್ಯಕ್ತಿಯೇ ಎಂದರೆ ಸರಿಯಲ್ಲ. ಈ ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ

ಸಿ ಡಬ್ಲ್ಯೂ -5

ಪಿ ಡಬ್ಲ್ಯೂ-3

ಎಂದರೆ ಸರಿಯಲ್ಲ. ಸದರಿ ವಿಚಾರವಾಗಿ ನಾನು ಪೋಲಿಸರಿಗೆ ಹೇಳಿಕೆ ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಹೇಳಿಕೆಯನ್ನು ನಿ ಪಿ -7 ಎಂದು ಗುರುತಿಸಲಾಯಿತು. ನಾನು ಆರೋಪಿತನಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು : ಆರೋಪಿತರ ಪರ ಶ್ರೀ ಆರ್ ಸಿ ಎಸ್ ವಕೀಲರಿಂದಃ**

ಅಪಘಾತ ಯಾರ ತಪ್ಪಿನಿಂದ ಆಗಿದೆ ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸರಿ ಇದೆ.

ಸಹಿ/-

(ಶ್ರೀಮತಿ ಹುಲ್ಲೂರ ಹೇಮಲತಾ ಬಸಪ್ಪ)
ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು,
ರಾಣೇಬೆನ್ನೂರು.